**OS.No.312/2018**
**PW-1**

ದಿನಾಂಕ 21-12-2021 ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.

**ಮುಖ್ಯ ವಿಚಾರಣೆ : ವಾದಿಯ ಪರ ಶ್ರೀ ಎನ್ ಎ ಬಿ ವಕೀಲರಿಂದಃ**

ನಾನು ನನ್ನ ಮುಖ್ಯ ವಿಚಾರಣೆಯ ಬದಲಾಗಿ ಪ್ರಮಾಣ ಪತ್ರವನ್ನು ಸಲ್ಲಿಸಿದ್ದು, ಅದರಲ್ಲಿರುವ ಸಂಗತಿಗಳನ್ನು ನಾನೇ ವಕೀಲರಿಗೆ ಹೇಳಿ ಬರೆಸಿರುತ್ತೇನೆ. ಅದರಲ್ಲಿರುವ ಸಂಗತಿಗಳು ಸತ್ಯದಿಂದ ಕೂಡಿದ್ದು, ಪ್ರಮಾಣ ಪತ್ರದಲ್ಲಿರುವ ಸಹಿಗಳು ನನ್ನದೇ ಆಗಿರುತ್ತವೆ.

ಆಸ್ತಿ ನಂ. 497/1 ರ ಕರ ನಿರ್ಧರಣಾ ಪಟ್ಟಿಯನ್ನು ಹಾಜರು ಮಾಡಿದ್ದು ಅದನ್ನು ನಿಪಿ-1 ಎಂದು, ಆಸ್ತಿ ನಂ. 497/ ಎ 1 ರ ಕರ ನಿರ್ಧರಣಾ ಪಟ್ಟಿಯನ್ನು ಹಾಜರು ಮಾಡಿದ್ದು ಅದನ್ನು ನಿಪಿ-2 ಎಂದು, ಅಸಲು ದಾವಾ ನಂ. 67 /2008 ರ ಡಿಕ್ರಿಯ ಧೃಡೀಕೃತ ಪ್ರತಿಯನ್ನು ಹಾಜರು ಮಾಡಿದ್ದು ಅದನ್ನು ನಿಪಿ-3 ಎಂದು, ನಾಲ್ಕು ಛಾಯಾಚಿತ್ರಗಳನ್ನು ಹಾಜರು ಮಾಡಿದ್ದು, ಅವುಗಳಿಗೆ ಸಂಬಂಧಿಸಿದ ಸಿ.ಡಿ ಇಲ್ಲ ಎಂದು ಪ್ರತಿವಾದಿಗಳ ಪರ ವಕೀಲರು ಅವುಗಳನ್ನು ನಿಶಾನೆಗೊಳಿಸಲು ತಕರಾರು ಮಾಡಿದ್ದರಿಂದ ಅವುಗಳನ್ನು ನಿಶಾನೆಗೊಳಿಸಿರುವುದಿಲ್ಲ. ದಿಃ 17-12-2008 ರ ಫೋಟೊ ಸ್ಟುಡಿಯೋದ ಹಣ ಸಂದಾಯ ರಶೀದಿಯನ್ನು ಹಾಜರು ಮಾಡಿದ್ದು ಅದನ್ನು ನಿಪಿ-4 ಎಂದು ಗುರುತಿಸಲಾಯಿತು.

(ಮುಂದುವರೆದ ಮುಖ್ಯ ವಿಚಾರಣೆಗೆ ಸಮಯಾವಕಾಶ ಕೋರಿದ್ದು, ಮುಂದುವರೆದ ಮುಖ್ಯ ವಿಚಾರಣೆಗೆ ಮುಂದೂಡಲಾಯಿತು).

**(**ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಲಾಯಿತು**)**

ಓ. ಹೇ. ಕೆ ಸರಿ ಇದೆ ಎಂದು
ಒಪ್ಪಿರುತ್ತಾರೆ.

ದಿವಾಣಿ ನ್ಯಾಯಾಧೀಶರು ಮತ್ತು ಜೆ ಎಂ ಎಫ್ ಸಿ
ಹಾನಗಲ್

**OS.No.312/2018**
**PW-1**

ಸಾಕ್ಷಿದಾರರ ಸಹಿ